**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ.ಸಿ. ಸಂಖ್ಯೆ : 31/2025**

**ಚಾ.ಸಾಃ 7, ಫ್ರಾ.ಸಾಃ 7**

| | |
|---|---|
| ಸಾಕ್ಷಿದಾರನ ಹೆಸರು | ಮಂಜುನಾಥ ಗೌಡ |
| ತಂದೆಯ ಹೆಸರು | ಶಂಕರ ಗೌಡ |
| ವಯಸ್ಸು | 55 ವರ್ಷಗಳು |
| ಉದ್ಯೋಗ | ಕೂಲಿ ಕೆಲಸ |
| ವಾಸ್ತವ್ಯ | ಜಲವಳಕರ್ಕಿ, ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 06-03-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನ್ಯಾಯಾಲಯದ ಮುಂದಿರುವ ಆರೋಪಿತರು ಗೊತ್ತು. ಚಾ.ಸಾ. 1 ನನ್ನ ಚಿಕ್ಕಪ್ಪನ ಮಗ. ಚಾ.ಸಾ. 6 ನನ್ನ ಚಿಕ್ಕಪ್ಪ.

ಆರೋಪಿರು ಚಾ.ಸಾ. 1 ರವರನ್ನು ಹಲ್ಲೆ ಮಾಡಿದ್ದು ನಾನು ನೋಡಿಲ್ಲ. ನೋಡಿರುವುದಾಗಿ ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಸಂದರ್ಭದಲ್ಲಿ ಸ.ಸ.ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲಿಗೆ ಒಳಪಡಿಸಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು.)**

**ಪಾಟೀಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ,**

ದಿನಾಂಕ 28-10-2024 ರಂದು ರಾತ್ರಿ 08-3 ರ ಸಮಯಕ್ಕೆ ನಾನು ಚಿಕ್ಕಪ್ಪನವರ ಮನೆಯ ಹತ್ತಿರ ಹೋದಾಗ ಚಾ.ಸಾ. 1 ರವರು ಹುಂಬಹಿತ್ತಲ ಕೇರಿಯ ಕಡೆಗೆ ನಡೆದುಕೊಂಡು ಹೋಗುತ್ತಿದ್ದಾಗ ನ್ಯಾಯಾಲಯದ ಮುಂದಿರುವ ಆರೋಪಿತರು ಚಾ.ಸಾ. 1 ರವರನ್ನು ಅಡ್ಡ ಹಾಕಿ, ಅವಾಚ್ಯ ಶಬ್ದಗಳಿಂದ ಬೈದು, 2 ರಿಂದ 4 ನೇ ಆರೋಪಿತರು ಚಾ.ಸಾ. 1 ರವರ ಮೈಮೇಲೆ ಕೈಯಿಂದ ಹಲ್ಲೆ ಮಾಡಿದ್ದು, 1 ನೇ ಆರೋಪಿ ನ್ಯಾಯಾಲಯದ ಮುಂದಿರುವ ಕಟ್ಟಿಗೆಯಿಂದ ಚಾಸಾ. 1 ರವರ ಎಡಗಾಲಿಗೆ ಬೀಸಿ ಹೊಡೆದು ತೀವ್ರ ಸ್ವರೂಪದ ಗಾಯ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಸ್ಥಳಕ್ಕೆ ಚಾ.ಸಾ. 6 ರವರು ಬಂದಿದ್ದು, ಆಗ ಆರೋಪಿತರು ಸ್ಥಳದಿಂದ ಓಡಿ ಹೋಗಿದ್ದು, ನಾನು ಆರೋಪಿತರು ಹಲ್ಲೆ ಮಾಡಿದ್ದನ್ನು ಕಣ್ಣಾರೆ ನೋಡಿರುತ್ತೇನೆ ಎಂದರೆ ಸರಿಯಲ್ಲ. ಘಟನೆ ಬಗ್ಗೆ ಈಗ ಓದಿ ಹೇಳಿದಂತೆ ಹೇಳಿಕೆ ನಿಡಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆಯ ಭಾಗವನ್ನು ನಿ.ಪಿ. 11 ಎಂದು ಗುರುತಿಸಲಾಯಿತು. ಘಟನೆಯನ್ನು ನೋಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲವೆಂದು ಹೇಳಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**